All India Radio: Bangalore
Regional Bulletin In Kannada
21.09.2026 / 2.30 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ವಿಧಾನಮಂಡಲದ ವಿಶೇಷ ಅಧಿವೇಶನ ; ವಿಧಾನಸಭೆಯಲ್ಲಿ ಕಸ್ತೂರಿ ರಂಗನ್ ವರದಿ ಕುರಿತಂತೆ ಚರ್ಚೆ
- ಮೇಲ್ಮನೆಯಲ್ಲಿ ವಂದೇ ಮಾತರಂ ಗದ್ದಲ : ಎರಡು ಚರಣಗಳಿಗಷ್ಟೇ ಸೀಮಿತಗೊಳಿಸಿದ ಸರ್ಕಾರ ; ಪ್ರತಿಪಕ್ಷಗಳಿಂದ ಆಕ್ಷೇಪ
- ಸೈಬರ್ ದಾಳಿ ತಡೆಯಲು ಕ್ವಾಂಟಮ್ ಕ್ಷೇತ್ರದಲ್ಲಿ ಕೃತಕಬುದ್ಧಿಮತ್ತೆ ಆಧಾರಿತ ಕ್ಯೂಶೀಲ್ಡ್-೨.೦ ; ಸಚಿವ ಪ್ರಿಯಾಂಕ್ ಖರ್ಗೆ
- ರಾಜ್ಯದಲ್ಲಿ ನಕಲಿ ಔಷಧ ಜಾಲದ ತನಿಖೆ ಚುರುಕು ; ಅನುಮಾನಾಸ್ಪದ ಔಷಧಿಗಳ ಬಗ್ಗೆ ದೂರು ನೀಡುವಂತೆ ಆರೋಗ್ಯ ಇಲಾಖೆ ಮನವಿ
- ರಾಜ್ಯದಲ್ಲಿ ನಗರ ನಕ್ಸಲೀಯರಿಗೆ ವಿದೇಶದಿಂದ ಹಣ - ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಧಾನ

<><><><>

ಡಾ.ಕಸ್ತೂರಿ ರಂಗನ್ ವರದಿ ಹಾಗೂ ರಾಜ್ಯದ ಬರಪರಿಸ್ಥಿತಿ ಕುರಿತಂತೆ ಚರ್ಚಿಸಲು ನಡೆಯುತ್ತಿರುವ ವಿಶೇಷ ಅಧಿವೇಶನದಲ್ಲಿ ವಿಧಾನಸಭೆಯಲ್ಲಿಂದು ನವಲಗುಂದದ ಮಾಜಿ ಶಾಸಕ ಡಾ.ಆರ್.ಬಿ.ಸಿರಿಯಣ್ಣನವರ ನಿಧನಕ್ಕೆ ಸಂತಾಪ ಸೂಚಿಸಲಾಯಿತು. ಸಭಾಧ್ಯಕ್ಷ ಜಿ.ಎಸ್.ಪಾಟೀಲ್ ಮಂಡಿಸಿದ ಸಂತಾಪ ಸೂಚನೆ ನಿರ್ಣಯದ ಮೇಲೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರತಿಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದರು. ಮೃತರ ಗೌರವಾರ್ಥ ಸದನದಲ್ಲಿ ಒಂದು ನಿಮಿಷ ಮೌನಾಚರಣೆ ಮಾಡಲಾಯಿತು. ಸಂತಾಪ ಸೂಚನೆಯ ಬಳಿಕ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಕಸ್ತೂರಿ ರಂಗನ್ ವರದಿಯ ಮೇಲೆ ನಿಲುವಳಿ ಸೂಚನೆಗೆ ಅವಕಾಶ ನೀಡಬೇಕು ಎಂದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣ ಬೈರೇಗೌಡ, ಇದೇ ವಿಷಯದ ಮೇಲೆ

ಚರ್ಚೆ ಮಾಡಲು ವಿಶೇಷ ಅಧಿವೇಶನ ಕರೆಯಲಾಗಿದೆ. ಹೀಗಾಗಿ ನಿಲುವಳಿ ಸೂಚನೆ ತರಲು ಅವಕಾಶವಿಲ್ಲ ಎಂದು ತಿಳಿಸಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಧ್ಯ ಪ್ರವೇಶಿಸಿ, ರಾಜ್ಯದಲ್ಲಿ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ರೈತರು ಎದುರಿಸುತ್ತಿರುವ ಸಂಕಷ್ಟ ಹಾಗೂ ಡಾ.ಕೆ.ಕಸ್ತೂರಿ ರಂಗನ್ ವರದಿಯ ಕುರಿತು ವಿಶೇಷವಾಗಿ ಚರ್ಚಿಸಲು ಈ ಅಧಿವೇಶನ ಕರೆಯಲಾಗಿದೆ ಎಂದು ಸ್ಪಷ್ಟನೆ ನೀಡಿದರು.

ಈ ವಿಚಾರದಲ್ಲಿ ರಾಜಕಾರಣ ಮಾಡದೇ ಸದನದಲ್ಲಿ ಚರ್ಚೆ ನಡೆಸಿ, ಒಮ್ಮತದ ನಿರ್ಣಯಕ್ಕೆ ಬರಬೇಕು ಎಂದು ತಿಳಿಸಿದರು. ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಪಶ್ಚಿಮಘಟ್ಟ ಪ್ರದೇಶ ವ್ಯಾಪ್ತಿಯ ರೈತರ ಮತ್ತು ಜನಸಾಮಾನ್ಯರ ಹಿತ ಕಾಪಾಡುವುದು ಸರ್ಕಾರದ ಕರ್ತವ್ಯವಾಗಿದೆ ಎಂದು ಸ್ಪಷ್ಟಪಡಿಸಿದರು.

<><><><>

ವಿಧಾನ ಪರಿಷತ್ ಕಲಾಪದಲ್ಲಿ ಇಂದು ಪೂರ್ಣ ಪ್ರಮಾಣದ ವಂದೇ ಮಾತರಂ ಗೀತೆ ಹಾಡದ ಆಡಳಿತ ಪಕ್ಷದ ಧೋರಣೆಯನ್ನು ಖಂಡಿಸಿ ಪ್ರತಿಪಕ್ಷ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಅಧಿವೇಶನ ಆರಂಭವಾದ ಕೂಡಲೇ ವಂದೇ ಮಾತರಂ ಗೀತೆಯ ಎರಡು ಚರಣಗಳಷ್ಟೇ ಹಾಡಿದ ಕಾಂಗ್ರೆಸ್ ಸದಸ್ಯರು, ಬಳಿಕ ಸಂವಿಧಾನ ಪ್ರತಿಜ್ಞಾವಿಧಿ ಓದಲು ಆರಂಭಿಸಿದರು. ಪ್ರತಿಪಕ್ಷ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಪೂರ್ಣವಾಗಿ ವಂದೇ ಮಾತರಂ ಗೀತೆಯನ್ನು ಹಾಡಿ ಸಂವಿಧಾನದ ಪೀಠಿಕೆ ಒದಿದರು. ಬಳಿಕ, ಪ್ರತಿಪಕ್ಷಗಳ ಸದಸ್ಯರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಈ ಮಧ್ಯೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಬರ ಹಾಗೂ ಕಸ್ತೂರಿ ರಂಗನ್ ವರದಿ ಚರ್ಚೆಗೆ ವಿಶೇಷ ಅಧಿವೇಶನವನ್ನು ಕರೆದಿರುವ ಟಿಪ್ಪಣಿಯನ್ನು ಓದಿದರು. ಬಳಿಕ, ಪ್ರತಿಪಕ್ಷಗಳ ಸದಸ್ಯರ ಗದ್ದಲ ಹೆಚ್ಚಾದ ಹಿನ್ನಲೆಯಲ್ಲಿ ಸಭಾಪತಿ ಸಲೀಂ ಅಹಮ್ಮದ್ ಕಲಾಪವನ್ನು ೧೦ ನಿಮಿಷಗಳ ಕಾಲ ಮುಂದೂಡಿದರು.

<><><><>

ಕಸ್ತೂರಿ ರಂಗನ್ ವರದಿಯನ್ನು ರಾಜ್ಯ ಸರ್ಕಾರಗಳು ತಿರಸ್ಕರಿಸಿಕೊಂಡು ಬಂದರೂ, ಕೇಂದ್ರ ಸರ್ಕಾರ ಅಧಿಸೂಚನೆಗಳನ್ನು ಹೊರಡಿಸುತ್ತಿರುವುದರಿಂದ ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವುದು ಅಗತ್ಯವಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನ ಪರಿಷತ್‌ನಲ್ಲಿಂದು ಮಾತನಾಡಿದ ಅವರು, ಪರಿಸರವನ್ನು ಉಳಿಸುವ ಮೂಲಕ ಪಶ್ಚಿಮ ಘಟ್ಟಗಳಲ್ಲಿ

ಸಾವಿರಾರು ವರ್ಷಗಳಿಂದ ವಾಸಿಸುತ್ತಿರುವ ಜನರು ಹಾಗೂ ಭವಿಷ್ಯದ ಪೀಳಿಗೆಗಳ ಹಿತರಕ್ಷಣೆಯ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ಪರಿಸರ ಉಳಿದರೆ ಮಾತ್ರ ಅಲ್ಲಿನ ಜನರ ಬದುಕು ಉಳಿಯಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><>

ಕ್ವಾಂಟಮ್ ತಂತ್ರಜ್ಞಾನ ಕ್ಷೇತ್ರದಲ್ಲಿ ರಾಜ್ಯವು ಜಾಗತಿಕ ಮಟ್ಟದ ಸಾಮರ್ಥ್ಯಗಳನ್ನು ನಿರ್ಮಿಸುವತ್ತ ಮುನ್ನಡೆಯುತ್ತಿದೆ ಎಂದು ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಕ್ವಾಂಟಮ್ ಭದ್ರತಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕ್ಯೂಎನ್‌ಯು ಲ್ಯಾಬ್ಸ್ ಸಂಸ್ಥೆಯ ೧೦ನೇ ವಾರ್ಷಿಕೋತ್ಸವ ಹಾಗೂ ನೂತನ ಉತ್ಪನ್ನ ಕ್ಯೂಶೀಲ್ಡ್ ೨.೦ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಸಂಸ್ಥೆಯ ಕ್ವಾಂಟಮ್ ತಂತ್ರಜ್ಞಾನ ಕ್ಷೇತ್ರದ ಸಾಧನೆಯನ್ನು ಶ್ಲಾಘಿಸಿದ್ದಾರೆ. ಕ್ವಾಂಟಮ್ ಭದ್ರತೆಯನ್ನು ಕೃತಕಬುದ್ಧಿಮತ್ತೆ ಆಧಾರಿತ ಭದ್ರತಾ ಪದರದೊಂದಿಗೆ ಸಂಯೋಜಿಸುವ ಉದ್ದೇಶದಿಂದ ಕ್ಯೂಶೀಲ್ಡ್ ೨.೦ ಅನ್ನು ರೂಪಿಸಲಾಗಿದೆ. ಹೆಚ್ಚುತ್ತಿರುವ ಸೈಬರ್ ದಾಳಿಗಳು ಹಾಗೂ ಭವಿಷ್ಯದಲ್ಲಿ ಎದುರಾಗಬಹುದಾದ ಸವಾಲುಗಳನ್ನು ಎದುರಿಸಲು ಇದು ನೆರವಾಗುವ ಸಾಮರ್ಥ್ಯ ಹೊಂದಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ರಾಜ್ಯದಲ್ಲಿ ನಕಲಿ ಔಷಧ ಜಾಲದ ತನಿಖೆ ಚುರುಕುಗೊಂಡಿದ್ದು, ಎಫ್‌ಡಿಎ ಅಧಿಕಾರಿಗಳು ನಕಲಿ ಔಷಧ ಪೂರೈಕೆಯಾಗಿರುವ ಆಸ್ಪತ್ರೆ, ಫಾರ್ಮಸಿ ಹಾಗೂ ಮೆಡಿಕಲ್ ಶಾಪ್‌ಗಳ ಮಾಹಿತಿ ಕಲೆ ಹಾಕುತ್ತಿದ್ದಾರೆ. ಈಗಾಗಲೇ ೮ ಔಷಧ ಸಂಸ್ಥೆಗಳ ಪರವಾನಿಗೆಗಳನ್ನು ಆರೋಗ್ಯ ಇಲಾಖೆ ಅಮಾನತುಗೊಳಿಸಿದೆ. ಇದೇ ವೇಳೆ ಅನುಮಾನಾಸ್ಪದ ಲೇಬಲ್‌ಗಳು ಮತ್ತು ಸ್ಕ್ಯಾನ್ ಆಗದ ಕ್ಯೂಆರ್ ಕೋಡ್‌ಗಳ ಬಗ್ಗೆ ಆರೋಗ್ಯ ಇಲಾಖೆ ಎಚ್ಚರಿಕೆ ನೀಡಿದೆ. ಔಷಧಿಗಳನ್ನು ಖರೀದಿಸುವಾಗ ಅನುಮಾನಸ್ಪದ ಬದಲಾವಣೆ ಕಂಡು ಬಂದರೆ ತಕ್ಷಣವೇ ಔಷಧ ಜಾರಿ ಅಧಿಕಾರಿಗಳಿಗೆ ತಿಳಿಸಲು ಆರೋಗ್ಯ ಇಲಾಖೆ ಗ್ರಾಹಕರಿಗೆ ಸೂಚಿಸಿದೆ.

<><><>

ರಾಜ್ಯವು ನಗರ ನಕ್ಸಲರಿಗೆ ಅಚ್ಚುಮೆಚ್ಚಿನ ತಾಣವಾಗುತ್ತಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್

ಮಾಡಿರುವ ಅವರು, ರಾಜ್ಯದಲ್ಲಿ ಎಡಪಂಥೀಯ ಉಗ್ರವಾದಕ್ಕೆ ಸಂಬಂಧಿಸಿದ ಚಟುವಟಿಕೆಗಳಿಗೆ ವಿದೇಶಿ ಸಂಸ್ಥೆಗಳು ಹಣಕಾಸಿನ ನೆರವು ನೀಡುತ್ತಿವೆ ಎಂದು ದೂರಿದ್ದಾರೆ. ವಿದೇಶಿ ಶಕ್ತಿಗಳು ಎಡಪಂಥೀಯ ಉಗ್ರವಾದವನ್ನು ಪಸರಿಸಲು ಬೆಂಗಳೂರನ್ನು ನೆಲೆವನ್ನಾಗಿ ಬಳಸಿಕೊಳ್ಳುತ್ತಿವೆ. ಅಮೆರಿಕದ ಸಂಘಟನೆಯೊಂದು ಬೆಂಗಳೂರಿನ ಎರಡು 'ಶೆಲ್ ಕಂಪನಿ'ಗಳಿಗೆ ೬೨ ಕೋಟಿ ರೂಪಾಯಿಗಳನ್ನು ವರ್ಗಾಯಿಸಿದೆ ಎಂದು ಆರೋಪಿಸಿದ್ದಾರೆ. ಜಾರಿ ನಿರ್ದೇಶನಾಲಯದ ತನಿಖೆಯ ವೇಳೆ ಈ ವಿಷಯ ಬೆಳಕಿಗೆ ಬಂದಿದೆ ಎಂದು ತಿಳಿಸಿದ್ದಾರೆ. ವಿದೇಶದಿಂದ ಕೋಟ್ಯಂತರ ರೂಪಾಯಿ ಹಣ ಹರಿದು ಬರುತ್ತಿದ್ದರೂ ಗೃಹ ಇಲಾಖೆಗೆ ಇದರ ಬಗ್ಗೆ ಅರಿವಿಲ್ಲವೇ ಎಂದು ಆರ್.ಅಶೋಕ ಪ್ರಶ್ನಿಸಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೩ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಮೇಕ್ ಇನ್ ಇಂಡಿಯಾ ಯೋಜನೆ ಕುರಿತು ಒಂದು ನೋಟ ಇಲ್ಲಿದೆ. ಭಾರತವನ್ನು ಜಾಗತಿಕ ಮಟ್ಟದ ಸ್ಪರ್ಧಾತ್ಮಕ ಉತ್ಪಾದನಾ ಕೇಂದ್ರವನ್ನಾಗಿ ಮಾಡುವ ಉದ್ದೇಶದಿಂದ ೨೦೧೪ರಲ್ಲಿ ಪ್ರಾರಂಭಿಸಲಾದ 'ಮೇಕ್ ಇನ್ ಇಂಡಿಯಾ' ಅಭಿಯಾನವು ದೇಶದ ಉತ್ಪಾದನಾ ಕ್ಷೇತ್ರದಲ್ಲಿ ಕ್ರಾಂತಿಯನ್ನುಂಟುಮಾಡಿದೆ. ಮಾರ್ಚ್ ೨೦೨೫ರ ವೇಳೆಗೆ, ೧೪ ಪ್ರಮುಖ ವಲಯಗಳ ಅಡಿಯಲ್ಲಿ ೨.೪೦ ಲಕ್ಷ ಕೋಟಿ ರೂಪಾಯಿಗೂ ಹೆಚ್ಚಿನ ಹೂಡಿಕೆಯಾಗಿದ್ದು, ಸುಮಾರು ೧೪ ಲಕ್ಷಕ್ಕೂ ಹೆಚ್ಚು ಉದ್ಯೋಗಗಳು ಸೃಷ್ಟಿಯಾಗಿವೆ. ಒಟ್ಟಾರೆಯಾಗಿ 'ಮೇಕ್ ಇನ್ ಇಂಡಿಯಾ' ಯೋಜನೆಯು 'ಮೇಡ್ ಇನ್ ಇಂಡಿಯಾ' ಹೆಸರನ್ನು ಜಾಗತಿಕ ಉತ್ಪಾದನಾ ರಂಗದ ಪ್ರಮುಖ ಗುರುತಾಗಿ ಪರಿವರ್ತಿಸಿದೆ.

<><><>

ಡಾ.ಕಸ್ತೂರಿ ರಂಗನ್ ವರದಿ ವಿರೋಧಿಸಿ ಇಂದು ರೈತ ಪರ ಸಂಘಟನೆಗಳು ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಪಟ್ಟಣ ಬಂದ್‌ಗೆ ಕರೆ ನೀಡಿದ್ದು ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮುಂಜಾನೆಯಿಂದಲೇ ವರ್ತಕರು ತಮ್ಮ ಅಂಗಡಿ, ಮುಂಗಟ್ಟುಗಳನ್ನು ಮುಚ್ಚಿ ಬಂದ್‌ಗೆ ಬೆಂಬಲ

ವ್ಯಕ್ತಪಡಿಸಿದ್ದಾರೆ. ಶಾಲಾ ಕಾಲೇಜುಗಳಿಗೆ ರಜೆ ನೀಡಲಾಗಿದೆ. ಬಸ್, ಆಟೋ, ಟ್ಯಾಕ್ಸಿ ಸೇರಿದಂತೆ ಬಹುತೇಕ ವಾಹನ ಸಂಚಾರ ಸ್ಥಗಿತಗೊಂಡಿದೆ.

<><><>

ಜಪಾನ್‌ನ ಐಚಿ ನಗೋಯಾದಲ್ಲಿ ನಡೆಯುತ್ತಿರುವ ೨೦ನೇ ಏಷ್ಯನ್ ಗೇಮ್ಸ್ ವೇಳೆ ಅಂತಾರಾಷ್ಟ್ರೀಯ ಒಲಿಂಪಿಕ್ ಸಮಿತಿ ಅಧ್ಯಕ್ಷ ಕಿರ್ಸ್ಟಿ ಕೊವೆಂಟ್ರಿ ಅವರನ್ನು ಕರ್ನಾಟಕ ಒಲಿಂಪಿಕ್ ಸಂಸ್ಥೆ ಅಧ್ಯಕ್ಷ ಡಾ.ಕೆ.ಗೋವಿಂದರಾಜ್ ಭೇಟಿಯಾಗಿ ಮಾತುಕತೆ ನಡೆಸಿದರು. ರಾಜ್ಯದ ಕ್ರೀಡಾಭಿವೃದ್ಧಿಗೆ ಕೆಒಎ ಕೈಗೊಂಡಿರುವ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ಜೊತೆಗೆ ಕ್ರೀಡಾಭಿವೃದ್ಧಿಗೆ ಕರ್ನಾಟಕ ಸರ್ಕಾರ ನೀಡುತ್ತಿರುವ ಪ್ರೋತ್ಸಾಹದ ಬಗ್ಗೆ ತಿಳಿಸಿದ್ದಾರೆ. ಕ್ರೀಡಾ ಚಟುವಟಿಕೆಗಳ ಸಂಬಂಧ ಮುಂದಿನ ದಿನಗಳಲ್ಲಿ ಬೆಂಗಳೂರಿಗೆ ಭೇಟಿ ನೀಡುವಂತೆ ಐಒಸಿ ಅಧ್ಯಕ್ಷ ಕಿರ್ಸ್ಟಿ ಕೊವೆಂಟ್ರಿ ಅವರನ್ನು ಆಹ್ವಾನಿಸಿದ್ದಾರೆ.

<><><>

ಕೊಡಗು ಜಿಲ್ಲೆಯಲ್ಲಿ ಸ್ಥಗಿತಗೊಂಡಿದ್ದ ಚಾರಣ ಪ್ರವಾಸಕ್ಕೆ ಈ ವಾರ ಸರ್ಕಾರದಿಂದ ಅನುಮತಿ ದೊರಕುವ ಸಾಧ್ಯತೆಯಿದೆ. ಚಾರಣಿಗರಿಗೆ ಸೂಕ್ತ ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ಅರಣ್ಯ ಇಲಾಖೆಯಿಂದ ೯೨ ಮಾರ್ಗದರ್ಶಿಗಳ ನೇಮಕ ಮಾಡಲಾಗಿದೆ. ಈಗಾಗಲೇ ಕುಶಾಲನಗರದಲ್ಲಿ ಚಾರಣ ಮಾರ್ಗದರ್ಶಿಗಳಿಗೆ ತರಬೇತಿ ನೀಡಲಾಗಿದೆ. ಕೊಡಗಿನ ತಡಿಯಂಡಮೋಳ್ ಶಿಖರದ ಚಾರಣವನ್ನು ಏಪ್ರಿಲ್ ತಿಂಗಳಿನಲ್ಲಿ ಕೇರಳದ ಯುವತಿಯೋರ್ವಳು ನಾಪತ್ತೆಯಾದ ಹಿನ್ನಲೆಯಲ್ಲಿ ಸ್ಥಗಿತಗೊಳಿಸಲಾಗಿತ್ತು. ೫ ತಿಂಗಳ ಬಳಿಕ ಮಾರ್ಗದರ್ಶಿಗಳ ನೆರವು ಪಡೆದು ಚಾರಣಿಗರು ಕೊಡಗಿನ ಬೆಟ್ಟಗಳಿಗೆ ಚಾರಣ ತೆರಳಲು ಅನುಕೂಲವಾಗುವಂತೆ ಚಾರಣ ಮಾರ್ಗವನ್ನು ತೆರೆಯಲಾಗುತ್ತದೆ ಎಂದು ಅರಣ್ಯಾಧಿಕಾರಿ ಅಭಿಷೇಕ್ ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>